ಅಸಲು ದಾವೆ ಸಂ: 83/2022

ಪಿ.ಡಬ್ಲು–1

**ದಿ: 18.01.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ವಾದಿ ಪರ ವಕೀಲರಾದ ಶ್ರೀ ಜೆ.ಹೆಚ್.ಬಿ. ರವರಿಂದ :**

ಈ ದಾವೆಯಲ್ಲಿ ನಾನು ವಾದಿಯಾಗಿದ್ದು ಇಂದು ನನ್ನ ಮೌಖಿಕ ಸಾಕ್ಷದ ಬದಲು ಈ ಮುಖ್ಯ ವಿಚಾರಣೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ ಅದರಲ್ಲಿ ಬರೆದ ಎಲ್ಲಾ ವಿಷಯಗಳು ಸರಿ ಮತ್ತು ನಿಜ ಇರುತ್ತವೆ. ಅವುಗಳನ್ನು ತಿಳಿದುಕೊಂಡು ನಾನು ಹೆಬ್ಬಟ್ಟಿನ ಗುರುತು ಹಾಕಿರುತ್ತೇನೆ.

ಈ ಕೆಳಗಿನ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

1) ಕ್ಯಾದಿಗೇರಾ ಗ್ರಾಮದ ಸರ್ವೆ ನಂ. 49/*/4 ರ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

2) ಕ್ಯಾದಿಗೇರಾ ಗ್ರಾಮದ ಸರ್ವೆ ನಂ. 49/*/8 ರ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

3) ಸ್ವೀಕೃತಿ ಪತ್ರದ ನೆರಳಚ್ಚು ಪ್ರತಿಯ ನ್ನು ಹಾಜರುಪಡಿಸಿರುತ್ತಾರೆ..

4) ತಹಸೀಲ್ದಾರ್ ಪತ್ರದ ನೆರಳಚ್ಚು ಪ್ರತಿಯನ್ನು ಹಾಜರುಪಡಿಸಿರುತ್ತಾರೆ.

ಆದ್ದರಿಂದ ದಾವೆಯನ್ನು ಡಿಕ್ರಿ ಮಾಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ

**ಪಾಟೀ ಸವಾಲು :** ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗಾಗಿ ಸಮಯ ಕೋರಿರುತ್ತಾರೆ ಅವರ ಕೋರಿಕೆಯ ಮೇರೆಗೆ ಸಮಯವನ್ನು ನೀಡಲಾಯಿತು.

(ಸಾಕ್ಷಿಯು ನೀಡಿರುವ ಸಾಕ್ಷವನ್ನು ಯಥಾವತ್ತಾಗಿ ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ.

ಸಿವಿಲ್ ಜಡ್ಜ್ & ಜೆ.ಎಂ.ಎಫ್.ಸಿ.
ದೇವದುರ್ಗ